# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1282 |
| ಸದಸ್ಯರ ಹೆಸರು | : | ಡಾ|| ತೇಜಸ್ವಿನಿಗೌಡ |
| ಉತ್ತರಿಸಬೇಕಾದ ದಿನಾಂಕ | : | 28.09.2020 |
| ಉತ್ತರಿಸುವವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಅರಣ್ಯ ಇಲಾಖೆಯ ವಿವಿಧ ವೃಂದದ ಅಧಿಕಾರಿಗಳ ಜೇಷ್ಠತಾ ಪಟ್ಟಿಯಲ್ಲಿರುವ ನ್ಯೂನತೆಯನ್ನು ಸರಿಪಡಿಸಲು ಸರ್ಕಾರ ರಚಿಸಿದ ಸಮಿತಿಯ ವರದಿಯನ್ನು ಸರ್ಕಾರ ಸಂಪೂರ್ಣವಾಗಿ ಒಪ್ಪಿದ ನಂತರ ಸಮಿತಿಯ ವರದಿಯನ್ನು ಯಥಾವತ್ತಾಗಿ ಅನುಷ್ಠಾನಗೊಳಿಸುವಂತೆ ಸಕ್ಷಮ ಪ್ರಾಧಿಕಾರಕ್ಕೆ ಹಾಗೂ ಇಲಾಖಾ ಮುಖ್ಯಸ್ಥರಿಗೆ ಸೂಚನೆ ನೀಡಿದ್ದು, ಅದರಂತೆ ಜೇಷ್ಠತಾ ಪಟ್ಟಿಯಲ್ಲಿರುವ ನ್ಯೂನ್ಯತೆಯನ್ನು ಸರಿಪಡಿಸಲಾಗಿದೆಯೇ; | ಸಮಿತಿಯ ವರದಿಯನ್ವಯ ಜೇಷ್ಠತಾ ಪಟ್ಟಿಗಳನ್ನು ಅಂತಿಮಗೊಳಿಸಲು ಸಕ್ಷಮ ಪ್ರಾಧಿಕಾರಕ್ಕೆ ನಿರ್ದೇಶನ ನೀಡಲಾಗಿದ್ದು, ಜೇಷ್ಠತಾ ಪಟ್ಟಿಯಲ್ಲಿ ಯಾವುದೇ ನ್ಯೂನತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಆ) | ಸಮಿತಿಯ ವರದಿಯನ್ನು ಅನುಷ್ಠಾನಗೊಳಿಸದೇ ಕೆನರಾ, ಮೈಸೂರು, ಬೆಂಗಳೂರು, ಕೊಡಗು, ಚಿಕ್ಕಮಗಳೂರು, ಧಾರವಾಡ ವೃತ್ತದ ಸಕ್ಷಮ ಪ್ರಾಧಿಕಾರವು ಉಪ ವಲಯ ಅರಣ್ಯಾಧಿಕಾರಿ ವೃಂದದಲ್ಲಿ ಈ ಹಿಂದೆ ಮಾಡಿರುವ ನ್ಯೂನತೆಗಳನ್ನು ನಿಯಮಬಾಹಿರವಾದ ಮತ್ತು ಬೇಜವಾಬ್ದಾರಿ ಕಾರಣಗಳನ್ನು ನಮೂದಿಸಿ ಸಮರ್ಥಿಸಿಕೊಂಡಿರುವುದು ಸರ್ಕಾರ ಮತ್ತು ಇಲಾಖಾ ಮುಖ್ಯಸ್ಥರ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು? ಈ ರೀತಿ ತಪ್ಪುಗಳನ್ನು ಪುನರಾವರ್ತಿಸುತ್ತಿರುವ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸಲು ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ? | ಸಮಿತಿಯು ನೀಡಿರುವ ವರದಿಯ ಆಧಾರದ ಮೇಲೆ ಕೆನರಾ, ಮೈಸೂರು, ಬೆಂಗಳೂರು, ಕೊಡಗು, ಚಿಕ್ಕಮಗಳೂರು, ಧಾರವಾಡ ಈ 06 ವೃತ್ತಗಳು ಸೇರಿದಂತೆ ಒಟ್ಟು 13 ಅರಣ್ಯ ವೃತ್ತಗಳಲ್ಲಿ ಉಪ ವಲಯ ಅರಣ್ಯಾಧಿಕಾರಿಗಳ ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಆಯಾ ವೃತ್ತದ ಸಕ್ಷಮ ಪ್ರಾಧಿಕಾರಿಗಳಾದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಿಸಿದ್ದು, ಜೇಷ್ಠತಾ ಪಟ್ಟಿಗಳಲ್ಲಿ ಯಾವುದೇ ನ್ಯೂನತೆಗಳು / ನಿಯಮಬಾಹಿರವಾದ ಮತ್ತು ಬೇಜವಾಬ್ದಾರಿ ಕಾರಣಗಳನ್ನು ನಮೂದಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಇ) | ಇದುವರೆವಿಗೆ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮವಾಗದಿದ್ದರೆ ವಿಳಂಬಕ್ಕೆ ಕಾರಣವೇನು; ಯಾವ ಕಾಲಮಿತಿಯೊಳಗೆ ಕ್ರಮವಹಿಸಲಾಗುವುದು? | ಮೇಲಿನ ಕಾರಣಗಳಿಗೆ ಯಾವುದೇ ಅಧಿಕಾರಿಗಳ ಮೇಲೆ ಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಅಪಜೀ 171 ಅಅಸೇ 2020

(ಆನಂದ್ ಸಿಂಗ್)

ಅರಣ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಸಚಿವರು)